ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಕೆ.ಆರ್.ಪುರ ಬೆನ್ನಿಗಾನಹಳ್ಳಿ ಕೆರೆ ಅಭಿವೃದ್ಧಿಯ ಬಗ್ಗೆ

ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

366 (484) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೆ.ಆರ್.ಪುರ ವಿಧಾನ ಸಭಾ ಕ್ಷೇತ್ರದಲ್ಲಿನ ವಾರ್ಡ್-56ರಲ್ಲಿ ಇರುವ ಬೆನ್ನಿಗಾನಹಳ್ಳಿ ಕೆರೆ ಕಲುಷಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆನ್ನಿಗಾನಹಳ್ಳಿ ಕೆರೆಯನ್ನು ಹತ್ತು ತಿಂಗಳ ಹಿಂದೆ ಅಭಿವೃದ್ಧಿಪಡಿಸಿ ಸರಿಯಾದ ಸಮರ್ಪಕ ನಿರ್ವಹಣೆ ಮಾಡದೆ ಸರ್ಕಾರದ ಹಣವನ್ನು ಪೋಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬೆನ್ನಿಗಾನಹಳ್ಳಿ ಕೆರೆ ಮತ್ತೆ ಅವಸಾನದ ಹಾದಿ ಹಿಡಿದಿದ್ದು, ಸದರಿ ಕೆರೆಯು ಮಳೆ ಬಂದಾಗ ಕೆರೆಯ ದಡದ ಮೇಲಿನ ಮಣ್ಣು ಕೆರೆಗೆ ಸೇರುತ್ತಿದ್ದು, ಕೆರೆಯ ಬದಿಯಲ್ಲಿರುವ ಕಲ್ಲು ಬೆಂಚುಗಳು ಮುರಿದು ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ,ೕಲ ಸದರಿ ಕೆರೆಯನ್ನು ಅಭಿವೃದ್ಧಿ ಪಡಿಸಲು ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)